ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರು
ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ
ಮಾನ್ಯ ಮುಖ್ಯಮಂತ್ರಿಗಳ ಹೇಳಿಕೆ

ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನೆ:

ರಾಜ್ಯದಲ್ಲಿ ಪ್ರತಿ ವರ್ಷ ವಿಧಾನ ಸಭಾ ಸದಸ್ಯರಿಗೂ ಹಾಗೂ ವಿಧಾನ ಪರಿಷತ್ತಿನ ಸದಸ್ಯರಿಗೆ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ರೂ.2 ಕೋಟಿಯನ್ನು ನೀಡಲಾಗುತ್ತಿದೆ. ಆದರೆ ಇದು ಯಾವುದಕ್ಕೂ ಸಾಲದು. ಆದರೆ ವಿಧಾನ ಸಭೆಯ ಶಾಸಕರಿಗೆ ವಿಶೇಷ ಅನುದಾನವಾಗಿ ರೂ. 25 ರಿಂದ 50 ಕೋಟಿಗೂ ಹೆಚ್ಚು ನೀಡಿರುವುದು ಸಂತೋಷದ ವಿಷಯ. ಆದರೆ ಅವರಂತೆ ಸ್ಥಳೀಯವಾಗಿ ವಿಧಾನ ಪರಿಷತ್ತಿನ ಸದಸ್ಯರಿಗೂ ಸಹ ಸಾಕಷ್ಟು ಜನರು ಸಾರ್ವಜನಿಕ ಕೆಲಸ ಕಾರ್ಯಗಳ ಬಗ್ಗೆ ದೂರುಗಳನ್ನು ನೀಡುತ್ತಾರೆ. ಆದರೆ ವಿಧಾನಪರಿಷತ್ತಿನ ಸದಸ್ಯರಿಗೆ ಯಾವುದೇ ವಿಶೇಷ ಅನುದಾನವಿಲ್ಲದೇ, ಕೈಕಟ್ಟಿ ಹಾಕಿರುವ ಪರಿಸ್ಥಿತಿಯನ್ನು ಪರಿಷತ್ತಿನ ಸದಸ್ಯರು ಅನುಭವಿಸುತ್ತಿದ್ದಾರೆ. ಈ ಹಿನ್ನಲೆಯಲ್ಲಿ ವಿಧಾನ ಪರಿಷತ್ತಿನ ಸದಸ್ಯರಿಗೂ ಸಹ ವಿಶೇಷ ಅನುದಾನಗಳನ್ನು ಬಿಡುಗಡೆ ಮಾಡಿದ್ದಲ್ಲಿ ಜನರಿಗೆ ಹೆಚ್ಚಿನ ಮೂಲಭೂತ ಸೌಕರ್ಯಗಳನ್ನು ನೀಡಲು ಸಹಕಾರಿಯಾಗುವುದರಿಂದ ಈ ವಿಷಯವನ್ನು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯಲು ಬಯಸುತ್ತೇನೆ.

ಹೇಳಿಕೆ:

ರಾಜ್ಯದ ವಿವಿಧ ವಿಧಾನ ಸಭಾ ಕ್ಷೇತ್ರಗಳ ಶಾಸಕರುಗಳಿಂದ ಸ್ವೀಕೃತವಾಗಿದ್ದ ಕೋರಿಕೆಗಳ ಮೇರೆಗೆ ಸದರಿ ವಿಧಾನಸಭಾ ಕ್ಷೇತ್ರಗಳಲ್ಲಿನ ಅಗತ್ಯತೆಯನ್ನು ಪರಿಗಣಿಸಿ ಬಹುತೇಕ ವಿಧಾನ ಸಭಾ ಕ್ಷೇತ್ರಗಳ ವಿವಿಧ ಅಭಿವೃದ್ಧಿ ಕಾಮಗಾರಿ/ಚಟುವಟಿಕಗಳನ್ನು ಕೈಗೆತ್ತಿಕೊಳ್ಳಲು ರಾಜ್ಯದ ಆರ್ಥಿಕ ಸಂಪನ್ಮೂಲಗಳ ಲಭ್ಯತೆಯ ಆಧಾರದ ಮೇಲೆ ವಿಶೇಷ ಅನುದಾನವನ್ನು ವಿವಿಧ ಇಲಾಖೆಗಳಡಿ ಮಂಜೂರು ಮಾಡಲಾಗುತ್ತದೆ. ಆದರೆ ಈ ರೀತಿ ಮಂಜೂರು ಮಾಡಲಾಗಿರುವ ವಿಶೇಷ ಅನುದಾನವನ್ನು ಪ್ರತಿ ಆರ್ಥಿಕ ಸಾಲಿನಲ್ಲಿ ನೀಡಲಾಗುತ್ತಿರುವುದಿಲ್ಲ ಹಾಗೂ ನೀಡುವ ಬಗ್ಗೆ ಉದ್ದೇಶಿಸಿರುವುದಿಲ್ಲ.

(ಬಸವರಾಜ ಬೊಮ್ಮಾಯಿ)
ಮುಖ್ಯ ಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 14/12/2022 10:51 AM